ತುಮಕೂರು ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜು ಖಚ್ಗೆ ಕೊಡಲ್ಪಟ್ಟ ಇಸ್ತಿಹಾರ್ ವಿಜ್ಞಾಪನ ಪತ್ರಿಕೆ.

ತಾರೀಖು 11ನೆ ಜುಲೈ 1907.

ಮದ್ದಗಿರಿ ತಾಲ್ಲೂಕು ಮಿಡಿಗೇಸಿ ಹೋಬಳಿ ಐಯ್ಯನಹಳ್ಳಿ ಗ್ರಾಮವನ್ನು 1907ನೆ ಇಸವಿ 28ನೆ ಆಗಸ್ಟು ತಾರೀಖಿನಲ್ಲಿ ಸದರಿ ಐಯ್ಯನಹಳ್ಳಿ ಗ್ರಾಮದಲ್ಲಿ ಬಹಿರಂಗವಾಗಿ ಹರಾಜು ಮಾಡಲ್ಪಡುತ್ತೆ.

ಹರಾಜು ದಿವಿ 11 ಘಂಟೆಗೆ ಉಸಕ್ಕಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡ್ಡ ದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಗ್ರಾಮವು ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿರುವ ಸಂದರ್ಭದಲ್ಲಿ, ಮದ್ದಗಿರಿ ಡಿವೀಜ್ಞ ಅಸಿಸ್ಟೆಂಟ್ ಕಮಾಷನರವರು ಇಷ್ಟಾನುಸಾರವಾಗಿ ಗ್ರಾಮವನ್ನು ಪೂರ್ತಿಯಾಗಿ ಆಗಲಿ ಅಥವಾ ವೃತ್ತಿಗಳನ್ನು ಪ್ರತ್ಯೇಕವಾಗಿ ಆಗಲಿ ಹರಾಜು ಮಾಡಬಹುದು.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜು ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡ ಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೇ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಗೆ ಸದರಿ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟು ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೇ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ ಬಾಕೀದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವಷ್ಟೂರಾ ಕಂದಾಯದ ಹಣವನ್ನು, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲಾ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜು ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ ಹರಾಜುದಾರನು ಸದರಿ ಸ್ವತ್ತಿನ ಸ್ವಾಧೀನವನ್ನು ಹೊಂದುವರು ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾಜು ಸರಟಿಫಿಕೇಟು ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆರುಜ್ಜಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಾಲಿತ್ಯ (ಲೋಪ) ಗಳಿಗೆ ಗವರ್ಮೆಂಟಿನವರು ಜವಾಬುದಾರರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯೂಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲೆ ಹುಕುಮಿಗೆ ಬದ್ಧವಾಗಿ ಇರತಕ್ಕದ್ದು.

ತಾಲ್ಲೂಕು.	ಹೋಬಳಿ.	ಗ್ರಾಮದ ಹೆಸರು.	ಖಾತೇದಾರರ ಹೆಸರು.	ಸರ್ವೆ ನಂಬರು.	ಭೂಮಿಯ ಸ್ವಭಾವ. ಖುಸ್ಕಿ	ತರಿ	ಬಾಗಾಯಿತು.	ಆಕಾರ.	ಸರಕಾರಕ್ಕೆ ಬರಬೇಕಾದ ಬಾಕೀ ಹೊಬಲಗು.	ಹರಾಜು ಆಗುವ ತಾರೀಖು.	ಹರಾಜು ಆಗುವ ಸ್ಥಳ.
ಮದ್ದಗಿರಿ	ಮಿಡಿಗೇಸಿ	ಐಯ್ಯನಹಳ್ಳಿ ಗ್ರಾಮ	ಕ್ರಿಷ್ಣ ನಾಯಿಕರು ಮತ್ತು ನರಸಿಂಹಾಚಾರ್.	ಪೂರ್ತಿ ಗ್ರಾಮ	ಖಂಡಿ. ಕೊಳಗ. ಪಡಿ. 6 5 13	ಖಂಡಿ. ಕೊಳಗ. ಪಡಿ. 6 — 13 — 0	ಖಂಡಿ. ಕೊಳಗ. ಪಡಿ. 0 11 13	ರೂ. ಆ. ಪೈ. 100 0 0	1906—07ನೆ ಸಾಲಿಗೆ. ರೂ. ಆ. ಜೋಡಿ ಮೊಬಲಗು 30 4 ನೋಟೀಸ್ ಫೀ ವಗೈರೆ 1 0 40 4 ಚಕ್ಕು ಬಂದಿ.	28—8—07	ಐಯ್ಯನಹಳ್ಳಿ.

ಪರಂಪೋಕು. ಖಂಡಿ. ಕೊಳಗ. ಪಡಿ. 5 17 15

ಪೂರ್ವಕ್ಕೆ—ಗಂಗಲವಾಯಿಪಾಳ್ಯ.
ಪಶ್ಚಿಮಕ್ಕೆ—ಕುರಡಿಹಳ್ಳಿ ಹೊಲಬು.
ಉತ್ತರಕ್ಕೆ— ಡಿಟೋ
ದಕ್ಷಿಣಕ್ಕೆ—ಸತ್ತಿಗನಹಳ್ಳಿ, ಬಿನಕನಹಳ್ಳಿ.

ಎಂ. ಶ್ರೀನಿವಾಸಮೂರ್ತಿ,
ಫಾರ್ ಡೆಪ್ಯೂಟಿ ಕಮಿಷನರ್.